ಮೂಡಿಗೆರೆ ಕ್ಷೇತ್ರಕ್ಕೆ ಸೇರಿದ ಮೂಡಿಗೆರೆ, ಬಣಕಲ್, ಕಳಸ ಜೂನಿಯರ್ ಕಾಲೇಜುಗಳ ಪ್ರಿನ್ಸಿಪಾಲರ ಹುದ್ದೆ ಖಾಲಿ ಇರುವ ಬಗ್ಗೆ.

2822 - ಶ್ರೀಮತಿ ಮೋಟಮ್ಮ (ಮೂಡಿಗೆರೆ) : ಮಾನ್ಯ ಶಿಕ್ಷಣ ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೂಡಿಗೆರೆ ವಿಧಾನಸಭಾ ಕ್ಷೇತ್ರಕ್ಕೆ ಸೇರಿದ ಮೂಡಿಗೆರೆ , ಬಣಕಲ್, ಕಳಸ ಜೂನಿಯರ್ ಕಾಲೇಜುಗಳಲ್ಲಿ ಎಷ್ಟು ವರ್ಷಗಳಿಂದ ಪ್ರಿನ್ಸಿಪಾಲರ ಹುದ್ದೆ ಖಾಲಿ ಇರುವುದು?

ಆ) ಇದುವರೆವಿಗೂ ಆ ಪ್ರಿನ್ಸಿಪಾಲರುಗಳ ಹುದ್ದೆಗಳನ್ನು ಭರ್ತಿ ಮಾಡದಿರಲು ಕಾರಣವೇನು?

ಶ್ರೀ ಎಂ.ವೀರಪ್ಪ ಮೊಯಿಲಿ (ಶಿಕ್ಷಣ ಮತ್ತು ಸಂಸದೀಯ ವ್ಯವಹಾರಗಳ ಸಚಿವರು) :

ಅ) 1) ಸರ್ಕಾರಿ ಪದವಿ ಪೂರ್ವ ಕಾಲೇಜು ಮೂಡಿಗೆರೆಯಲ್ಲಿ ದಿನಾಂಕ 28-05-1990ರಿಂದ ಖಾಲಿಯಿರುತ್ತದೆ

2) ಸರ್ಕಾರಿ ಪದವಿ ಪೂರ್ವ ಕಾಲೇಜು, ಬಣಕಲ್‌ನಲ್ಲಿ ದಿನಾಂಕ 07-12-1987ರಿಂದ ಖಾಲಿ ಇರುತ್ತದೆ.

3) ಸರ್ಕಾರಿ ಪದವಿ ಪೂರ್ವ ಕಾಲೇಜು ಕಳಸದಲ್ಲಿ ದಿನಾಂಕ 07-12-1988 ರಿಂದ ಖಾಲಿ ಇರುತ್ತದೆ.

ಆ) ಸರ್ಕಾರಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರ ಜೇಷ್ಠತಾಪಟ್ಟಿಯ ಮೇರರೆಗೆ ಉಪನ್ಯಾಸಕರುಗಳಿಗೆ ಪ್ರಾಂಶುಪಾಲರಾಗಿ ಬಡ್ತಿ ನೀಡಲು ಕ್ರಮ ಕೈಗೊಳ್ಳಲಾಗುತ್ತಿದೆ.

ವಿದ್ಯಾರ್ಥಿಗಳ ಸಂಖ್ಯೆ ಬಗ್ಗೆ

2758 - ಶ್ರೀ ಎಲ್.ಆರ್. ಶಿವರಾಮೇಗೌಡ (ನಾಗಮಂಗಲ) : ಮಾನ್ಯ ಶಿಕ್ಷಣ ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) ಮಂಡ್ಯ ಜಿಲ್ಲೆಯ ನಾಗಮಂಗಲ ತಾಲ್ಲೂಕಿನ ವಿವಿಧ ಸರ್ಕಾರಿ ಪ್ರೌಢಶಾಲೆಗಳಲ್ಲಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು?

ಆ) ಮೇಲ್ಕಂಡ ಪ್ರೌಢ ಶಾಲೆಗಳಲ್ಲಿರುವ ಶಿಕ್ಷಕರ ಸಂಖ್ಯೆ ಎಷ್ಟು

ಇ) ಶಿಕ್ಷಕರ ಕೊರತೆ ನೀಗಿಸಲು ಕೈಗೊಳ್ಳಲಿರುವ ತತ್‌ಕ್ಷಣದ ಕ್ರಮಗಳೇನು?

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಮತ್ತು ಸಂಸದೀಯ ವ್ಯವಹಾರಗಳ ಸಚಿವರು) :

1. ಬಾಲಕರ ಸಂಖ್ಯೆ	1314
2. ಬಾಲಕಿಯರ ಸಂಖ್ಯೆ	795
ಒಟ್ಟು	2109

ಆ) 85